**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 2556/2022**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.06**

**ದಿನಾಂಕಃ 26.03.2026** **ಸಿಡಬ್ಲ್ಯೂ.15**

| | |
|---|---|
| ಹೆಸರು | ಮಹಮ್ಮದ್ ರಸೂಲ್ |
| ತಂದೆ ಹೆಸರು | ಮಹಮ್ಮದ್ ಆರೀಫ |
| ವಯಸ್ಸು | 64 ವರ್ಷ |
| ಉದ್ಯೋಗ | ನಿವೃತ್ತ ಎ ಎಸ್ ಐ |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ದಿಃ 06.12.2019 ರಿಂದ ದಿಃ 31.12.2024 ರವರೆಗೆ ಎ ಎಸ್ ಐ ಆಗಿ ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 22.12.2021 ರಂದು ಪ್ರಕರಣದ ಕಡತವನ್ನು ಚಾಸಾ.14 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರೆಸಿ ಗಾಯಾಳು ರಾಜಪ್ಪ ಮರಣ ಹೊಂದಿರುವುದರಿಂದ ಕಲಂ 304(ಎ) ನ್ನು ಅಳವಡಿಸಿಕೊಳ್ಳಲು ನ್ಯಾಯಾಲಯಕ್ಕೆ ಮನವಿ ಸಲ್ಲಿಸಿರುತ್ತೇನೆ. ಸಾಕ್ಷಿಯು ಗುರುತಿಸಿದ ಮನವಿಯನ್ನು ನಿಪಿ.21 ಎಂದು ಸಾಕ್ಷಿಯ ಸಹಿಯನ್ನು ನಿಪಿ.21(ಎ) ಎಂದು ಗುರುತಿಸಲಾಯಿತು. ಅದೇ ದಿನ ಹರಿಹರ ಸರ್ಕಾರಿ ಆಸ್ಪತ್ರೆಗೆ ಶವಾಗಾರಕ್ಕೆ ಬೇಟಿ ನೀಡಿ ಚಾಸಾ.4 ಮತ್ತು 5 ರವರಿಗೆ ಶವಪಂಚನಾಮೆಗೆ ಸಹಕರಿಸುವಂತೆ ನೋಟಿಸ ನೀಡಿ ಸದರಿಯವರ ಸಮಕ್ಷಮ ಬೆಳಿಗ್ಗೆ 9.30 ರಿಂದ 11.30 ರವರೆಗೆ ಮೃತ ರಾಜಪ್ಪ ಇವರ ಶವಪಂಚನಾಮೆ ಜರುಗಿಸಿ ಛಾಯ ಚಿತ್ರ ತೆಗೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಪಂಚರಿಗೆ ನೀಡಿದ ನೋಟಿಸನ್ನು ನಿಪಿ.22 ಎಂದು ಸಾಕ್ಷಿಯ ಸಹಿಯನ್ನು ನಿಪಿ.22 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಶವ ತನಿಖಾ ವರದಿಯನ್ನು ನಿಪಿ.23 ಎಂದು ಸಾಕ್ಷಿಯ ಸಹಿಯನ್ನು ನಿಪಿ.23 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನು ನಿಪಿ.24 ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ.1, 7 ಮತ್ತು 3 ನೇ ಆರೋಪಿಯ ಹೇಳಿಕೆಯನ್ನು ಪಡೆದಿರುತ್ತೇನೆ. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.17 ರವರಿಗೆ ನೀಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಬಿ ಎಸ್ ವಕೀಲರಿಂದಃ**

ಪಿರ್ಯಾದಿ ಪವನ್ ಪ್ರಕರಣದಲ್ಲಿ 2 ನೇ ಆರೋಪಿ ಎಂದರೆ ಸರಿ. ದಿಃ 22.12.2021 ರಂದು ಪ್ರಕರಣದ ಕಡತವನ್ನು ತನಿಖೆಗೆ ಪಡೆದಿರುತ್ತೇನೆ . ಕಡತವನ್ನು ಪಡೆದ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸಾಕ್ಷಿಯು ನಾನು ಪಿ ಎಸ್ ಐ ರವರ ಮೌಖಿಕ ಆದೇಶದ ಮೇರೆಗೆ

ಪಡೆದಿರುತ್ತೇನೆ ಎಂದು ನುಡಿಯುತ್ತಾರೆ ಚಾಸಾ.16 ನನ್ನ ಮೇಲಾಧಿಕಾರಿಗಳು ಎಂದರೆ ಸರಿ. ಸದರಿಯವರ ನಿರ್ದೇಶನದ ಮೇರೆಗೆ ನಾನು ಕರ್ತವ್ಯ ನಿರ್ವಹಿಸುತ್ತೇನೆ ಎಂದರೆ ಸರಿ. ಮೃತ ರಾಜಪ್ಪನವರ ಕುಟುಂಬಕ್ಕೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು 1 ಮತ್ತು 3 ನೇ ಆರೋಪಿತರ ಹೇಳಿಕೆ ಪಡೆದಿದ್ದೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಪಂಚನಾಮೆ ಜರುಗಿಸಿಲ್ಲ ಎಂದರೆ ಸರಿಯಲ್ಲ. ಪ್ರಕರಣಕ್ಕೆ ಅನುಕೂಲವಾಗಲಿ ಎಂದು ಆರೋಪಿತರ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ